# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** 2022-23ನೇ ಸಾಲಿನ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದ ಯೋಜನೆಗಳನ್ನು ಅನುಷ್ಠಾನಗೊಳಿಸಲು ಪರಿಷ್ಕೃತ ಮಾರ್ಗಸೂಚಿಗಳನ್ನು ಹೊರಡಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಸಕಇ 245 ಜಿಎಂಎಸ್ 2004, ದಿನಾಂಕ:27.04.2005. ಹಾಗೂ 12.10.2006.
2. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲೂಡಿ 80 ಎಂಡಿಸಿ 2014 ದಿನಾಂಕ: 28.02.2015.
3. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲೂಡಿ 60 ಎಂಡಿಸಿ 2016 ದಿನಾಂಕ: 27.10.2016.
4. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲೂಡಿ 55 ಎಂಡಿಸಿ 2017 ದಿನಾಂಕ: 19.05.2017.
5. ಸರ್ಕಾರದ ಆದೇಶ ಸಂಖ್ಯೆ:ಎಂಡಬ್ಲೂಡಿ 29 ಎಂಡಿಸಿ 2020 ದಿನಾಂಕ: 27.08.2020.
6. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲೂಡಿ 61 ಎಂಡಿಸಿ 2021 ದಿನಾಂಕ: 29.09.2021.
7. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲೂಡಿ 50 ಎಂಡಿಸಿ 2021 ದಿನಾಂಕ: 09.08.2021.
8. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಎಂಡಬ್ಲೂಡಿ 61 ಎಂಡಿಸಿ 2021 ದಿನಾಂಕ: 15.11.20210. ಮತ್ತು 2.12.2021
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ ಬೆಂಗಳೂರು ಇವರ ಏಕ ಕಡತ ಸಂಖ್ಯೆ: ಕಅಅನಿ/ಹೊಮಾಸೂ/2022-23 ದಿನಾಂಕ: 29.04.2022.

*****

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಿಂದ (8)ರವರೆಗಿನ ಸರ್ಕಾರದ ಆದೇಶಗಳಲ್ಲಿ ಹೊರಡಿಸಲಾಗಿರುವ ಮಾರ್ಗಸೂಚಿಗಳನ್ವಯ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ವಿವಿಧ ಸಾಲ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (9)ರಲ್ಲಿನ ಏಕ ಕಡತದಲ್ಲಿ 2022-23ನೇ ಸಾಲಿನ ಹಲವು ಯೋಜನೆಗಳನ್ನು ಅನುಷ್ಠಾನಗೊಳಿಸಲು ಪರಿಷ್ಕೃತ ಮಾರ್ಗಸೂಚಿಗಳನ್ನು ಹೊರಡಿಸುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

...2.

ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲೂಡಿ 39 ಎಂಡಿಸಿ 2022, ಬೆಂಗಳೂರು. ದಿನಾಂಕ:23.05.2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಸಾಲಿಗೆ, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳಿಗೆ ಈ ಕೆಳಕಂಡಂತೆ ಹಲವು ಮಾರ್ಗ ಸೂಚಿಗಳನ್ನು ಪರಿಷ್ಕರಿಸಿ ಅನುಷ್ಠಾನಗೊಳಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

| ಕ್ರ ಸಂ | ಯೋಜನೆಯ ಹೆಸರು | ಈ ಹಿಂದೆ ನಿಗಮದಿಂದ ಅರಿವು ಯೋಜನೆಯಡಿಯಲ್ಲಿ ಮಂಜೂರಾತಿ ನೀಡುತ್ತಿದ್ದ ಬೋಧನಾ ಶುಲ್ಕದ ವಿವರ | 2022-23ನೇ ಸಾಲಿಗೆ ಅನುಷ್ಠಾನಗೊಳಿಸಲು ಮಂಜೂರಾತಿ ನೀಡಬೇಕಾದ ಕೋರ್ಸ್ ವೈಸ್ ಭೋಧನಾ ಶುಲ್ಕ |
|---|---|---|---|
| 01 | ಅರಿವು (ವಿದ್ಯಾಭ್ಯಾಸ ಸಾಲ) ಯೋಜನೆ | ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ (ಸಿ.ಇ.ಟಿ/ನೀಟ್) ಆಯ್ಕೆಯಾದ ಎಂ.ಬಿ.ಬಿ.ಎಸ್. ಕೋರ್ಸ್‌ಗಳಿಗೆ ಸರ್ಕಾರಿ ಕೋಟಾದಲ್ಲಿ ಸರ್ಕಾರಿ/ಖಾಸಗಿ ಕಾಲೇಜುಗಳಿಗೆ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಗರಿಷ್ಠ ರೂ.2.00 ಲಕ್ಷದವರೆಗೆ ಬಿಡುಗಡೆ (ಹೊಸ ಮತ್ತು ರಿನ್ಯೂವಲ್ ಪ್ರಕರಣಕ್ಕೆ) ಮಾಡುವುದು. | ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ (ಸಿ.ಇ.ಟಿ/ನೀಟ್) ಆಯ್ಕೆಯಾದ ಎಂ.ಬಿ.ಬಿ.ಎಸ್. ಎಂ.ಡಿ/ಎಂ.ಎಸ್ ಕೋರ್ಸ್‌ಗಳಿಗೆ ಸರ್ಕಾರಿ ಕಾಲೇಜುಗಳಿಗೆ ಸರ್ಕಾರಿ ಕೋಟಾದಲ್ಲಿ ಸರ್ಕಾರಿ/ಖಾಸಗಿ ಕಾಲೇಜುಗಳಿಗೆ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಗರಿಷ್ಠ ರೂ.3.00 ಲಕ್ಷದವರೆಗೆ ಬಿಡುಗಡೆ ಮಾಡುವುದು. |
| 02. | ಅರಿವು (ವಿದ್ಯಾಭ್ಯಾಸ ಸಾಲ) ಯೋಜನೆ | ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ (ಸಿ.ಇ.ಟಿ/ನೀಟ್) ಆಯ್ಕೆಯಾದ ಬಿ.ಡಿ.ಎಸ್ ಹಾಗೂ ಆಯುಷ್ ಪದವಿ ಕೋರ್ಸ್‌ಗಳಿಗೆ ಸರ್ಕಾರಿ ಕೋಟಾದಲ್ಲಿ ಸರ್ಕಾರಿ/ಖಾಸಗಿ ಕಾಲೇಜುಗಳಿಗೆ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಬೋಧನಾ ಶುಲ್ಕ ಮಾತ್ರ ಗರಿಷ್ಠ ರೂ.30.000/- (ರಿನ್ಯೂವಲ್ ಪ್ರಕರಣಕ್ಕೆ ಮಾತ್ರ). ಬಿಡುಗಡೆ ಮಾಡುವುದು. | ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ (ಸಿ.ಇ.ಟಿ/ನೀಟ್) ಆಯ್ಕೆಯಾದ ಬಿ.ಡಿ.ಎಸ್.ಎಂ.ಡಿ.ಎಸ್ ಕೋರ್ಸ್‌ಗಳಿಗೆ ಗರಿಷ್ಠ ರೂ.1.00 ಲಕ್ಷದವರೆಗೆ, ಆಯುಷ್ ಹಾಗೂ ಪದವಿ ಕೋರ್ಸ್‌ಗಳಿಗೆ ಸರ್ಕಾರಿ ಕೋಟಾದಲ್ಲಿ ಸರ್ಕಾರಿ/ಖಾಸಗಿ ಕಾಲೇಜುಗಳಿಗೆ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಗರಿಷ್ಠ ರೂ.50,000/- ಗಳನ್ನು ಬಿಡುಗಡೆ ಮಾಡುವುದು. |

...3.

| | | | |
|---|---|---|---|
| 03. | | ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ (ಸಿ.ಇ.ಟಿ/ನೀಟ್) ಆಯ್ಕೆಯಾದ ಬ್ಯಾಚುಲರ್ ಆಫ್ ಆರ್ಕಿಟೆಕ್ಚರ್/ ಇಂಜಿನಿಯರಿಂಗ್/ಟೆಕ್ನಾಲಜಿ (ಬಿ.ಇ/ಬಿ.ಟೆಕ್), ಕೋರ್ಸ್‌ಗಳಿಗೆ ಸರ್ಕಾರಿ ಕೋಟಾದಲ್ಲಿ ಸರ್ಕಾರಿ/ಖಾಸಗಿ ಕಾಲೇಜುಗಳಿಗೆ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಬೋಧನಾ ಶುಲ್ಕ ಮಾತ್ರ ಗರಿಷ್ಠ ರೂ.30.000/- ಗಳನ್ನು ಬಿಡುಗಡೆ (ಹೊಸ ಮತ್ತು ರಿನ್ಯೂವಲ್ ಪ್ರಕರಣಕ್ಕೆ) ಮಾಡುವುದು. | ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ (ಸಿ.ಇ.ಟಿ/ನೀಟ್) ಆಯ್ಕೆಯಾದ ಬ್ಯಾಚುಲರ್ ಆಫ್ ಆರ್ಕಿಟೆಕ್ಚರ್/ ಇಂಜಿನಿಯರಿಂಗ್/ಟೆಕ್ನಾಲಜಿ (ಬಿ.ಇ/ಬಿ.ಟೆಕ್), ಬಿ.ಆರ್ಕ್, ಎಂ.ಟೆಕ್, ಎಂ.ಇ, ಎಂ.ಆರ್ಕ್.ಮತ್ತು MBA,MCA,LLB. ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಬೋಧನಾ ಶುಲ್ಕ ಮಾತ್ರ ಗರಿಷ್ಠ ರೂ.50,000/- ಗಳನ್ನು ಬಿಡುಗಡೆ ಮಾಡುವುದು. |
| 04. | ಟ್ಯಾಕ್ಸಿ/ ಗೂಡ್ಸ್ ವಾಹನ/ ಪ್ಯಾಸೆಂಜರ್ ಆಟೋರಿಕ್ಷಾ ಖರೀದಿಸಲು ಸಹಾಯಧನ ಯೋಜನೆ | 1)ಘಟಕ ವೆಚ್ಚದ ಗರಿಷ್ಠ ರೂ.75,000/- ನಿಗಮದ ವತಿಯಿಂದ ಸಹಾಯಧನವಾಗಿದ್ದು ಇನ್ನುಳಿದ ಮೊತ್ತವು ಬ್ಯಾಂಕ್ ಸಾಲವಾಗಿರುತ್ತದೆ. | ಬ್ಯಾಂಕುಗಳಿಂದ ಮಂಜೂರಾತಿ ನೀಡಿದ/ಪಡೆದ ಫಲಾನುಭಾವಿಗಳಿಗೆ ಆಟೋರಿಕ್ಷಾ/ ಗೂಡ್ಸ್ ವಾಹನ/ ಟ್ಯಾಕ್ಸಿ ಖರೀದಿಸಲು ವಾಹನದ ಮೌಲ್ಯದ ಶೇ.33 ರಷ್ಟು ಸಹಾಯಧನ ಗರಿಷ್ಠ ರೂ.2.50 ಲಕ್ಷವನ್ನು ನೀಡಲಾಗುವುದು. |
| 05. | | 2) ಈ ಯೋಜನೆಯಡಿಯಲ್ಲಿ ಖರೀದಿಸುವ ಆಟೋರಿಕ್ಷಾ/ಟ್ಯಾಕ್ಸಿ/ಗೂಡ್ಸ್ ವಾಹನದ ಮೌಲ್ಯವು ಕನಿಷ್ಠ ರೂ.1.50 ಲಕ್ಷಗಳಿಂದ ಗರಿಷ್ಠ ರೂ.7.50 ಲಕ್ಷಗಳಾಗಿರತಕ್ಕದ್ದು (ತೆರಿಗೆಯನ್ನು ಹೊರೆತು ಪಡಿಸಿ) | ಈ ಯೋಜನೆಯಡಿಯಲ್ಲಿ ಖರೀದಿಸುವ ಪ್ಯಾಸೇಂಜರ್ ಆಟೋರಿಕ್ಷಾ ವಾಹನದ ಮೌಲ್ಯವು ಕನಿಷ್ಠ ರೂ.2.25 ಲಕ್ಷಗಳಿಂದ ಗರಿಷ್ಠ ರೂ.3.50 ಲಕ್ಷಗಳಾಗಿರತಕ್ಕದ್ದು. (ಎಲ್ಲಾ ತೆರಿಗೆಗಳು ಸೇರಿ) |
| 06. | | 3) ಅರ್ಜಿದಾರರ ವಯೋಮಿತಿ 18ರಿಂದ 45 ವರ್ಷಗಳು. | ಅರ್ಜಿದಾರರ ವಯೋಮಿತಿ 18ರಿಂದ 55 ವರ್ಷಗಳು. |
| 07. | ಸ್ವಯಂ ಉದ್ಯೋಗ ಯೋಜನೆ | 1.ಸ್ವಯಂ ಉದ್ಯೋಗ ಯೋಜನೆಯಡಿ ಘಟಕ ವೆಚ್ಚ ರೂ.1.00ಲಕ್ಷದೊಳಗೆ ಇರುವ ಚಟುವಟಿಕೆಗಳಿಗೆ ಶೇ.50 ಅಥವಾ ಗರಿಷ್ಠ ಮಿತಿ ರೂ.35,000/-ದ ಸಹಾಯಧನ 2.ಸ್ವಯಂ ಉದ್ಯೋಗ ಯೋಜನೆಯಡಿ ರೂ.1.00ಲಕ್ಷಕ್ಕಿಂತ ಹೆಚ್ಚಿನ ಮೌಲ್ಯದ ಚಟುವಟಿಕೆಗಳಿಗೆ ಘಟಕ ವೆಚ್ಚದ ಶೇ.33 ಅಥವಾ ಗರಿಷ್ಠ ಮಿತಿ ರೂ.2.00ಲಕ್ಷದ ಸಹಾಯಧನ | ರಾಷ್ಟ್ರೀಕೃತ/ಷೆಡ್ಯೂಲ್ ಬ್ಯಾಂಕ್‌ಗಳ ಸಹಯೋಗದೊಂದಿಗೆ ಸಾಲ ಮತ್ತು ಸಹಾಯಧನ ಒದಗಿಸಲಾಗುವುದು. ಘಟಕ ವೆಚ್ಚದ ಶೇ.33 ಅಥವಾ ಗರಿಷ್ಠ ಮಿತಿ ರೂ.1.00ಲಕ್ಷದ ಸಹಾಯಧನ ನಿಗಮದಿಂದ ನೀಡಲಾಗುವುದು. |

...4.

| | | | |
|---|---|---|---|
| 08. | | 3.ಅರ್ಜಿದಾರರ ವಯೋಮಿತಿ 18ರಿಂದ 45 ವರ್ಷಗಳು. | ಅರ್ಜಿದಾರರ ವಯೋಮಿತಿ 18ರಿಂದ 55 ವರ್ಷಗಳು. |

ಇದಕ್ಕೆ ತಗಲುವ ವೆಚ್ಚವನ್ನು ಆಯಾ ಆರ್ಥಿಕ ವರ್ಷದಲ್ಲಿ ಈ ಯೋಜನೆಗಳಿಗೆ ನಿಗದಿಪಡಿಸಲಾಗುವ ಅನುದಾನದಲ್ಲಿ ಭರಿಸತಕ್ಕದ್ದು. ಹಾಗೂ ಫಲಾನುಭವಿ ಆಯ್ಕೆಯನ್ನು ಸದರಿ ಅನುದಾನದ ಮಿತಿಯಲ್ಲಿ ಮಾಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

Mumtaz Begum H.G. 23/5/2022
**(ಮುಕ್ತಾರ್ ಪಾಷ ಹೆಚ್.ಜಿ)**
ಸರ್ಕಾರದ ಅಧೀನ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ, ಹಜ್
ಮತ್ತು ವಕ್ಫ್ ಇಲಾಖೆ

ಗೆ,

1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ ಲೆಕ್ಕಪರಿಶೋಧನೆ/ಆರ್ಥಿಕ ಮತ್ತು ಕಂದಾಯ ಘಟಕ ಪರಿಶೋಧನೆ/ಲೆಕ್ಕಪತ್ರ/ಲೆಕ್ಕಪರಿಶೋಧನೆ) ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಅಲ್ಪಸಂಖ್ಯಾತರ, ನಿರ್ದೇಶನಾಲಯ, 20ನೇ ಮಹಡಿ, ವಿ.ವಿ ಗೋಪುರ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತ, ವಿ.ವಿ.ಗೋಪುರ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ, ಯೋಜನ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ), ವಿಧಾನ ಸೌಧ ಬೆಂಗಳೂರು.
6. ನಿರ್ದೇಶಕರು, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
7. ನಿಬಂಧಕರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಜಯನಗರ,ಬೆಂಗಳೂರು.
8. ನಿರ್ದೇಶಕರು, ಆಯುಶ್ ಇಲಾಖೆ, ಆನಂದ್ ರಾವ್ ವೃತ್ತ, ಬೆಂಗಳೂರು.
9. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಬೆಂಗಳೂರು.
10. ಸಂಬಂಧಪಟ್ಟ ಎಲ್ಲಾ ವಿಶ್ವವಿದ್ಯಾಲಯಗಳು(ಕೆ.ಎಂ.ಡಿ.ಸಿ ಮುಖಾಂತರ)
11. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ, ಬೆಂಗಳೂರು.
12. ಸಮನ್ವಯಾಧಿಕಾರಿ, ಸಹಾಯವಾಣಿ ಕೇಂದ್ರ 24*7 (Helpline), ವಸಂತನಗರ, ಬೆಂಗಳೂರು.
13. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.